



ಅರುಣ ಪಿ. ಭಟ್ಟ

# ವಾರಭವಿಷ್ಯ 12.11.2020 ರಿಂದ 18.11.2020ರವರೆಗೆ




ವಾರದ ಆರಂಭದಲ್ಲಿ ಉನ್ನತ ಶಿಕ್ಷಣಕ್ಕೆ ಯತ್ನಿಸುತ್ತಿರುವವರಿಗೆ ಯಶಸ್ಸು. ಈ ಅವಧಿಯಲ್ಲಿ ದೇವತಾ ಆರಾಧನೆಗೆ ನಿಮ್ಮ ಶ್ರಮ ಹಾಕುತ್ತೀರಿ. ಬಹಳ ಒತ್ತಡ ಹಾಕಿ ನಿಮ್ಮಿಂದ ಕೆಲಸ ತೆಗೆಸುವ ಯತ್ನಗಳಾಗುತ್ತವೆ. ಉದ್ಯೋಗ ಸ್ಥಳದಲ್ಲಿ ಭಾವನಾತ್ಮಕ ಕೆಲವು ನಿರ್ಧಾರಗಳನ್ನು ತೆಗೆದುಕೊಳ್ಳಲಿದ್ದೀರಿ. ಕೆಮ್ಮು ನೆಗಡಿ ಕಾಡಬಹುದು. ಶುಭದಿನ 18. ಕನಕಧಾರಾ ಸ್ತೋತ್ರ ಪಠಣಮಾಡಿರಿ.

---

ಆಸ್ತಿ ಖರೀದಿಗೆ ಪ್ರಯತ್ನಿಸುತ್ತಿರುವವರು ಸಂಬಂಧಪಟ್ಟ ಕಾಗದಪತ್ರಗಳನ್ನು ಕೂಲಂಕಷ ಪರಿಶೀಲನೆ ನಡೆಸಲಿದ್ದೀರಿ. ದೊಡ್ಡ ಪ್ರಮಾದಗಳನ್ನು ತಡೆಯುವಂತೆ ಸನ್ನಿವೇಶಗಳು ನಿಮಗೆ ಪೂರಕ ಆಗಲಿದೆ. ಆದರೆ ಈ ಸಮಯದಲ್ಲಿ ಆರೋಗ್ಯ ಸ್ಥಿತಿ ಪೂರಕವಾಗಿಲ್ಲ. ಭುಜದ ನೋವು, ತಲೆ ನೋವು ಹಾಗೂ ಕಣ್ಣಿನ ಬೇನೆ ನಿಮ್ಮನ್ನು ಕಾಡಲಿದೆ. ಇದರಿಂದ ಚಿಂತೆಗೆ ಒಳಗಾಗುತ್ತೀರಿ. ಶುಭದಿನ 15. ಸೌಂದರ್ಯಲಹರಿ ಪಠಿಸಿರಿ.




---




ವಾರದ ಶುರುವಿನಲ್ಲೇ ವ್ಯಾಪಾರ ಉದ್ಯಮದಲ್ಲಿ ಪ್ರಗತಿ ಕಾಣಿಸುತ್ತದೆ. ಇದರಿಂದ ಆತ್ಮವಿಶ್ವಾಸ ಹೆಚ್ಚಾಗುತ್ತದೆ. ಪ್ರತಿಷ್ಠಿತ ಸಂಸ್ಥೆಯೊಂದರ ಜತೆಗೆ ಮಹತ್ವದ ಒಪ್ಪಂದವೊಂದಕ್ಕೆ ಸಹಿ ಹಾಕುವ ಸಾಧ್ಯತೆಗಳಿವೆ. ವ್ಯಾಪಾರ ಉದ್ಯಮ ವಿಸ್ತರಣೆ ಬಗ್ಗೆ ಮುಖ್ಯವಾದ ತೀರ್ಮಾನವನ್ನು ಕೈಗೊಳ್ಳಲಿದ್ದೀರಿ. ಈ ವಾರ ಆರೋಗ್ಯದಲ್ಲಿ ಯಾವುದೇ ಮುಖ್ಯ ಸಮಸ್ಯೆ ಕಾಡುವುದಿಲ್ಲ. ಶುಭದಿನ 17. ಕಾಲಭೈರವನ ಸೇವೆ ಮಾಡಿರಿ.

---

ವಾರದ ಶುರುವಿನಲ್ಲಿ ಕುಟುಂಬ ಸದಸ್ಯರ ಜತೆಗೆ ಕೆಲ ಅಸಮಾಧಾನದ ಘಟನೆಗಳು ಸಂಭವಿಸುವ ಸಾಧ್ಯತೆ ಇದೆ. ಈ ಅವಧಿಯಲ್ಲಿ ತುಂಬ ಆಪ್ತರಾದ ಸಂಬಂಧಿಕರನ್ನು ಭೇಟಿ ಆಗಲಿದ್ದೀರಿ. ಅವರಿಗೆ ಬಹಳ ಅಗತ್ಯವಾದ ನೆರವನ್ನು ನೀಡಲು ಮುಂದಾಗಲಿದ್ದೀರಿ. ಆದರೆ ಈ ಸಮಯದಲ್ಲಿ ಆರೋಗ್ಯ ಸಮಸ್ಯೆಗಳು ಕಾಣಿಸಿಕೊಳ್ಳಬಹುದು. ವ್ಯಾಯಾಮಗಳನ್ನು ಆರಂಭಿಸಲು ಯೋಚಿಸುತ್ತೀರಿ. ಶುಭದಿನ 18. ಲಿಂಗಾಷ್ಟಕ ಪಠಿಸಿರಿ.




---




ಆದಾಯ ಮೂಲ ಹೆಚ್ಚಿಸಿಕೊಳ್ಳುವ ಕಡೆಗೆ ಗಮನ ಕೇಂದ್ರೀಕೃತವಾಗಿರುತ್ತದೆ. ಇದರ ಜತೆಗೆ ಇಷ್ಟು ಕಾಲ ನೀವು ಅನುಸರಿಸಿಕೊಂಡು ಬಂದ ಪದ್ಧತಿಯಲ್ಲಿ ಬದಲಾವಣೆ ಮಾಡಲು ಮುಂದಾಗುತ್ತೀರಿ. ಶೈಕ್ಷಣಿಕ ಕ್ಷೇತ್ರದಲ್ಲಿ ಉತ್ತಮವಾದ ಪ್ರಗತಿ ಇದೆ. ಆರೋಗ್ಯದಲ್ಲಿ ಸಮಸ್ಯೆ ಕಾಣಿಸಿಕೊಳ್ಳಬಹುದು. ವಾರದ ಅಂತ್ಯಕ್ಕೆ ಆರೋಗ್ಯ ಚೇತರಿಸಿಕೊಳ್ಳುತ್ತದೆ. ಶುಭದಿನ 11. ಲಕ್ಷ್ಮೀ ನಾರಾಯಣ ಹೃದಯ ಪಾರಾಯಣ ಮಾಡಿರಿ.

---

ಉದ್ಯೋಗಸ್ಥರಿಗೆ ವಾರದ ಶುರುವಿನಲ್ಲಿ ಯಶಸ್ಸು. ಇದರಿಂದ ಬಹಳ ಸಂತೋಷ ಆಗುತ್ತದೆ. ಈ ಹಿಂದೆ ನೀವು ಹಾಕಿದ ಶ್ರಮಕ್ಕೆ ಒಂದೊಂದಾಗಿ ಯಶಸ್ಸು ದೊರೆಯಲು ಆರಂಭವಾಗುತ್ತದೆ. ಆರೋಗ್ಯವು ಉತ್ತಮವಾಗಿರುತ್ತದೆ. ವಾರದ ಮಧ್ಯ ಭಾಗದಲ್ಲಿ ವರ್ಚಸ್ಸು ಹೆಚ್ಚಾಗುತ್ತದೆ. ಮಕ್ಕಳಿಂದ ಶುಭ ಸುದ್ದಿ ಕೇಳುವ ಯೋಗವಿದೆ. ಖರ್ಚು ವೆಚ್ಚಗಳು ಅಧಿಕವಾಗಲಿವೆ. ಶುಭದಿನ 14. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




---




ನಿಮ್ಮ ಪ್ರತಿಭೆ ಪ್ರದರ್ಶನಕ್ಕೆ ಅವಕಾಶಗಳು ದೊರೆಯಲಿವೆ. ಉನ್ನತ ಶಿಕ್ಷಣದಲ್ಲಿ ಪ್ರಗತಿ ಇದೆ. ಕುಟುಂಬ ಸದಸ್ಯರ ಜತೆಗೆ ಬಾಂಧವ್ಯ ಗಟ್ಟಿಯಾಗಲಿದೆ. ಉಸಿರಾಟ ಸಮಸ್ಯೆ ಎದುರಾಗಲಿದೆ. ವಾರದ ಮಧ್ಯ ಭಾಗದಲ್ಲಿ ಉದ್ಯೋಗಸ್ಥರಿಗೆ ಅತ್ಯುತ್ತಮವಾದ ಸಮಯ. ಬಹಳ ಕಾಲದಿಂದ ಹಾಕಿಕೊಂಡಿದ್ದ ಯೋಜನೆಗಳನ್ನು ಜಾರಿಗೆ ತರಲಿದ್ದೀರಿ. ಶುಭದಿನ 17. ವಿಷ್ಣು ಸಹಸ್ರನಾಮ ಪಠಿಸಿರಿ.

---

ವಾರದ ಶುರುವಿನಲ್ಲಿ ಕೌಟುಂಬಿಕ ಸಂಗತಿಗಳಲ್ಲಿ ಹಿನ್ನಡೆ ಕಾಣುವಂತಾಗುತ್ತದೆ. ಇದರಿಂದ ಬಹಳ ಚಿಂತೆಗೆ ಗುರಿಯಾಗುತ್ತೀರಿ. ಈಗ ಮಾಡುತ್ತಿರುವುದಕ್ಕಿಂತ ಉತ್ತಮವಾಗಿ ಕೆಲಸ ಮಾಡಲು ಪ್ರಯತ್ನಿಸುತ್ತೀರಿ. ಹಲವು ಸವಾಲುಗಳು ಏಕಕಾಲಕ್ಕೆ ಎದುರಾಗುತ್ತವೆ. ಹೆಚ್ಚಿನ ಪ್ರಮಾಣದಲ್ಲಿ ಹಣ ಕೂಡ ಖರ್ಚಾಗಲಿದೆ. ಹಣಕಾಸಿನ ವೆಚ್ಚ ಹೆಚ್ಚಾಗಲಿದೆ. ಶುಭದಿನ 13. ದೈವ್ಯಪರಾದ ಕ್ಷಮಾಪನಾ ಸ್ತೋತ್ರ ಪಠಿಸಿರಿ.




---




ವಾರದ ಆರಂಭದಲ್ಲಿ ಗೃಹಾಲಂಕಾರದ ಕಡೆಗೆ ನಿಮ್ಮ ಗಮನ ಹೆಚ್ಚಿರುತ್ತದೆ. ಮನೆಗೆ ಅಗತ್ಯ ಇರುವ ವಸ್ತುಗಳನ್ನು ಒಟ್ಟು ಸೇರಿಸುವ ಕಡೆಗೆ ನಿಮ್ಮ ಪ್ರಯತ್ನ ಇರುತ್ತದೆ. ಒಟ್ಟಾರೆ ನಿಮ್ಮ ಮನೆಯ ಸ್ವರೂಪವನ್ನು ಬದಲಾಯಿಸುವುದರಲ್ಲಿ ತೊಡಗಿಸಿಕೊಳ್ಳುತ್ತೀರಿ. ಸಂಗಾತಿ ಹಾಗೂ ಮಕ್ಕಳ ಜತೆ ಸೇರಿ ಸ್ಥಳೀಯ ಮಾರುಕಟ್ಟೆಯಲ್ಲಿ ಖರೀದಿಯನ್ನು ಮಾಡಲಿದ್ದೀರಿ. ಶುಭದಿನ 16. ಆಂಜನೇಯ ಸ್ತೋತ್ರ ಪಠಿಸಿರಿ.

---

ಕುಟುಂಬ ವಿಚಾರಗಳಿಗೆ ಹೆಚ್ಚು ಪ್ರಾಶಸ್ತ್ಯ ನೀಡಲಿದ್ದೀರಿ. ಕಲೆ, ಸಿನಿಮಾ ಮತ್ತು ತಂತ್ರಜ್ಞಾನ ಕ್ಷೇತ್ರದಲ್ಲಿ ಇರುವವರಿಗೆ ಸಿಕ್ಕಾಪಟ್ಟೆ ಸ್ಪರ್ಧೆ ಎದುರಿಸಬೇಕಾಗುತ್ತದೆ. ವಾರದ ಮಧ್ಯ ಭಾಗದಲ್ಲಿ ನಿಮ್ಮ ಪ್ರತಿಭೆಗೆ ಹಾಗೂ ಶ್ರಮಕ್ಕೆ ಬಹುಮಾನ ದೊರೆಯಲಿದೆ. ನಿಮ್ಮ ಕ್ರಿಯಾತ್ಮಕ ಆಲೋಚನೆ ಬಳಸುವ ಅವಕಾಶ ದೊರೆಯಲಿದೆ. ನಿಮ್ಮ ಆತ್ಮವಿಶ್ವಾಸ ಹೆಚ್ಚಲಿದೆ. ಶುಭದಿನ 15. ಶ್ರೀ ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




---




ಆದಾಯವನ್ನು ಹೆಚ್ಚಳ ಮಾಡಿಕೊಳ್ಳಲು ಮಾಡುವ ಪ್ರಯತ್ನದಿಂದ ಏನೂ ಫಲ ದೊರೆಯುವುದಿಲ್ಲ. ಹೊಸ ಉತ್ಸಾಹದಿಂದ ಪುಟಿಯಲಿದ್ದೀರಿ. ಓದಿನಲ್ಲಿ ನಿಮ್ಮ ಏಕಾಗ್ರತೆ ಹೆಚ್ಚಳವಾಗಲಿದೆ. ವೈಯಕ್ತಿಕ ಬಾಂಧವ್ಯ ಗಟ್ಟಿಯಾಗಲಿದೆ. ಹಳೇ ವ್ಯವಹಾರದ ವಿವಾದಗಳು ತಲೆ ಎತ್ತುವ ಸಾಧ್ಯತೆಗಳು ಇದ್ದು, ಆ ಬಗ್ಗೆ ಎಚ್ಚರಿಕೆಯಿಂದ ಇರಬೇಕು. ಶುಭದಿನ 15. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.

---

ಆರೋಗ್ಯದ ಬಗ್ಗೆ ನಿಮ್ಮ ಗಮನ ಹೆಚ್ಚಾಗಲಿದೆ. ದೈಹಿಕವಾಗಿ ಸದೃಢರಾಗಲಿದ್ದೀರಿ. ಉದ್ಯಮಿಗಳು ಸ್ಥಳೀಯ ಮಾರುಕಟ್ಟೆ ಸಮೀಕ್ಷೆ ಮಾಡಲಿದ್ದೀರಿ. ಉತ್ಪನ್ನಗಳಿಗೆ ಮಾರುಕಟ್ಟೆ ವಿಸ್ತರಿಸಲು ಹೆಚ್ಚು ಶ್ರಮಿಸಲಿದ್ದೀರಿ. ನಿಮ್ಮ ಆರೋಗ್ಯ ಉತ್ತಮವಾಗಿರುತ್ತದೆ. ನಿಮ್ಮ ಆತ್ಮವಿಶ್ವಾಸ ಹೆಚ್ಚುತ್ತದೆ. ವಾರದ ಮಧ್ಯ ಭಾಗದಲ್ಲಿ ಹಣಕಾಸಿನ ಹರಿವು ಹೆಚ್ಚಳವಾಗಲಿದೆ. ಶುಭದಿನ 14. ಹನುಮಾನ್ ಚಾಲೀಸ್ ಓದಿರಿ.

